# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವ್ಯಾಪ್ತಿಯಲ್ಲಿ ಖಾಲಿ ಇರುವ ತಾಂತ್ರಿಕ ಸಿಬ್ಬಂದಿಯ ಹುದ್ದೆಗಳನ್ನು ತಾತ್ಕಾಲಿಕವಾಗಿ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:-**

1. ದಿನಾಂಕ: 07-09-2012 ರಂದು ಸನ್ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಚಿವರು, ಗ್ರಾಮೀಣಾಭಿವೃಧ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಇಲಾಖಾ ಕಾರ್ಯಚಟುವಟಿಕೆಗಳ ಪ್ರಗತಿ ಪರಿಶೀಲನಾ ಸಭೆ ನಡವಳಿಗಳು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ. ಮುಇಂ / ಪಂರಾಇಂಇ / ಬೆಂ / ಸಿ-8 / 2012-13/ 5088, ದಿನಾಂಕ: 10-09-2012.
3. ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 425 ವೆ-6/2012, ದಿನಾಂಕ: 14-12-2012.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 07-09-2012 ರಂದು ಸನ್ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಇಲಾಖಾ ಕಾರ್ಯಚಟುವಟಿಕೆಗಳ ಪ್ರಗತಿ ಪರಿಶೀಲನಾ ಸಭೆ ನಡವಳಿಯಲ್ಲಿ ಗ್ರಾಮ ಪಂಚಾಯತ್, ತಾಲ್ಲೂಕು ಪಂಚಾಯತ್, ಜಿಲ್ಲಾ ಪಂಚಾಯತ್ ಮಟ್ಟದಲ್ಲಿ ಅಗತ್ಯವಿರುವ ಸುಮಾರು 700 ಕಿರಿಯ ಇಂಜಿನಿಯರ್‌ಗಳ ಸೇವೆಯನ್ನು ತಾತ್ಕಾಲಿಕವಾಗಿ ಹೊರವಲಯ ಆಧಾರದ ಮೇಲೆ ಪಡೆದುಕೊಳ್ಳುವುದರ ಬಗ್ಗೆ ಅಗತ್ಯ ಕ್ರಮ ಕೈಗೊಂಡು ಪ್ರಗತಿ ಚುರುಕುಗೊಳಿಸುವುದು ಎಂದು ಸೂಚಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ: 10-09-2012ರ ಪತ್ರದಲ್ಲಿ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುತ್ತಾ, ಇಲಾಖೆಯ ವ್ಯಾಪ್ತಿಯಲ್ಲಿ 240 ಸಹಾಯಕ ಇಂಜಿನಿಯರ್ ಹುದ್ದೆಗಳು ಮತ್ತು 514 ಕಿರಿಯ ಇಂಜಿನಿಯರ್ ಹುದ್ದೆಗಳು ಖಾಲಿ ಉಳಿದಿದ್ದು, ಅವುಗಳ ಪೈಕಿ 140 ಸಹಾಯಕ ಇಂಜಿನಿಯರ್ ಹುದ್ದೆಗಳು ಮತ್ತು 306 ಕಿರಿಯ ಇಂಜಿನಿಯರ್ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಹಂತದಲ್ಲಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆಯೆಂದು ತಿಳಿಸುತ್ತಾ, ಕರ್ನಾಟಕ ಲೋಕ ಸೇವಾ ಆಯೋಗದಿಂದ ಭರ್ತಿ ಮಾಡಲು ಸಮಯಾವಕಾಶ ಹಿಡಿಯುವುದರಿಂದ ಅಲ್ಲಿಯವರೆಗೆ ಕಾಮಗಾರಿ ಕೆಲಸಗಳನ್ನು ನಿಗಧಿತ ಸಮಯದಲ್ಲಿ ಪೂರ್ಣಗೊಳಿಸಲು ಕಷ್ಟಸಾಧ್ಯವಾಗುತ್ತದೆಯೆಂದು ತಿಳಿಸುತ್ತಾ ಇಲಾಖಾ ವ್ಯಾಪ್ತಿಯಲ್ಲಿ ಖಾಲಿ ಇರುವ ಸದರಿ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ನೇಮಿಸಿಕೊಂಡು, ನಿಗಧಿತ ಸಮಯದಲ್ಲಿ ಕಾಮಗಾರಿ ಕೆಲಸಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಕೆಲಸನಿರ್ವಹಿಸಲು ಸಂಬಂಧಿಸಿದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ರವರಿಗೆ ಅನುಮತಿ ನೀಡುವಂತೆ ಕೋರಿರುತ್ತಾರೆ.

---2

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 14-12-2012ರ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು ಸದರಿ ಪ್ರಸ್ತಾವನೆಗೆ ಸಂಬಂಧ ಈಗಾಗಲೇ ಸಹಮತಿ ನೀಡಿರುವ 100 ಸಹಾಯಕ ಇಂಜಿನಿಯರ್‌ಗಳ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಿಕೊಳ್ಳುವವರೆಗೆ ಮಾತ್ರ ಇಲಾಖೆಯಲ್ಲಿ ಖಾಲಿ ಇರುವ 100 ಸಹಾಯಕ ಇಂಜಿನಿಯರ್ ಹುದ್ದೆಗಳ ಸೇವೆಯನ್ನು ಬಾಹ್ಯ ಮೂಲಗಳಿಂದ ಪಡೆಯಲು ಸಹಮತಿ ನೀಡಿರುತ್ತದೆ. ಈ ಪ್ರಕರಣವನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಗ್ರಾಅಪ 299 ಸೇಶಿಕಾ 2012 ಬೆಂಗಳೂರು,**
**ದಿನಾಂಕ. 21-01-2013.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ವ್ಯಾಪ್ತಿಯಲ್ಲಿ ಖಾಲಿ ಇರುವ ಸಹಾಯಕ ಇಂಜಿನಿಯರ್/ಕಿರಿಯ ಇಂಜಿನಿಯರ್ ಹುದ್ದೆಗಳ ಪೈಕಿ 100 ಸಹಾಯಕ ಇಂಜಿನಿಯರ್ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಿಕೊಳ್ಳುವವರೆಗೆ ಮಾತ್ರ ಖಾಲಿ ಇರುವ 100 ಸಹಾಯಕ ಇಂಜಿನಿಯರ್ ಹುದ್ದೆಗಳ ಸೇವೆಯನ್ನು ನಿಯಮಾನುಸಾರ ಬಾಹ್ಯ ಮೂಲಗಳಿಂದ ಪಡೆಯಲು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 425 ವೆ-6/2012, ದಿನಾಂಕ: 14-12-2012ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

21.01.13

ಪ್ರತಿ;

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
3. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್.
4. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
5. ಗ್ರಾ.ಅ.ರಾಜ್ ಇಲಾಖೆಯ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ (ಆಡಳಿತ-2) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
6. ಹೆಚ್ಚುವರಿ ಪ್ರತಿ: ರಕ್ಷಾ ಕಡತ: ಮಾಹಿತಿ ಕೇಂದ್ರ.